# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಿನಾಂಕ:07/11/2020 ರಂದು ಬೆಳಿಗ್ಗೆ:10.30 ಗಂಟೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬೇಗೂರು ವಾರ್ಡ್ ಸಂಖ್ಯೆ-192 ರ ವಾರ್ಡ್ ಸಮಿತಿ ಸಭೆಯನ್ನು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದಂತಹ ಶ್ರೀ.ನೀಲಕಂಠಯ್ಯ.ಕೆ.ಪಿ. ಸಹಾಯಕ ಕಾರ್ಯಪಾಲಕ ಅಭಿಯಂತರರು ರವರ ಸಮ್ಮುಖದಲ್ಲಿ ಅವರ ಅಧ್ಯಕ್ಷತೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ನಡೆಸಲಾಯಿತು.

ವಾರ್ಡ್ ಸಮಿತಿ ಕಾರ್ಯದರ್ಶಿ ಶ್ರೀ.ಚಲುವರಾಜು.ಎಸ್. ಕಿರಿಯ ಅಭಿಯಂತರರು, ವಾರ್ಡ್ ಸಂಖ್ಯೆ-192 ಬೇಗೂರು ರವರು ಸಭೆಗೆ ಹಾಜರಾಗಿದ್ದಂತಹ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು, ಹಾಗೂ ಇತರರನ್ನು ಸ್ವಾಗತಿಸಿ ಕಾರ್ಯಕ್ರಮ ಪ್ರಾರಂಭಿಸಿದರು.

## ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು:

1. ಕೋವಿಡ್-19 ಮಹಾಮಾರಿ ಸಾಂಕ್ರಮಿಕ ರೋಗ ಹರಡದಂತೆ ಮುಂಜಾಗ್ರತವಾಗಿ ತೆಗೆದುಕೊಳ್ಳಬಹುದಾದ ಕ್ರಮಗಳು.
2. ವಿಪತ್ತು ನಿರ್ವಹಣಾ ಸಮಿತಿ (Disaster Management Committee) ನಿರ್ವಹಿಸಬೇಕಾದ ಕ್ರಮಗಳ ಕುರಿತು.
3. ಘನತ್ಯಾಜ್ಯ ನಿರ್ವಹಣೆ ಬಗ್ಗೆ ಚರ್ಚಿಸುವುದು.
4. ವಾರ್ಡ್‌ನ ಸಾರ್ವಜನಿಕರ ಕುಂದುಕೊರತೆಗಳ ಬಗ್ಗೆ ಚರ್ಚಿಸುವುದು.
5. ಮುಂಗಾರು ಮಳೆಯಿಂದ ಸಂಭವಿಸಿದ/ಸಂಭವಿಸಬಹುದಾದ ಅನಾಹುತಗಳ ಕುರಿತು ಕ್ರಮ ಕೈಗೊಳ್ಳುವ ಬಗ್ಗೆ ಚರ್ಚಿಸುವುದು.

6. 110 ಹಳ್ಳಿಗಳ ಕುಡಿಯುವ ನೀರಿನ ಬಗ್ಗೆ ಚರ್ಚಿಸುವುದು,

## ವಾರ್ಡ್ ನಂ 192 ವಾರ್ಡ್ ಸಮಿತಿ ಸಭೆಯಲ್ಲಿ ಹಾಜರಿದ್ದವರು

| ಕ್ರ.ಸಂ | ಹೆಸರು | ಹುದ್ದೆ | |
|---|---|---|---|
| 1 | ಶ್ರೀ.ನೀಲಕಂಠಯ್ಯ.ಕೆ.ಪಿ. | ಅಧ್ಯಕ್ಷರು/ನೋಡೆಲ್ ಅಧಿಕಾರಿಗಳು | 9845989978 |
| 2 | ಶ್ರೀ.ಚಲುವರಾಜು.ಎಸ್. | ಕಾರ್ಯದರ್ಶಿ (ಕಿ.ಅ.) | 9620687103 |
| 3 | ಶ್ರೀ.ಆರ್.ಕುಮಾರ್ | ಬೆಸ್ಕಾಂ. ಸ.ಕಾ.ಅ. | 9449844670 |
| 4 | ಶ್ರೀಮತಿ.ವಿನಯಕುಮಾರಿ | ಸ.ಕಾ.ಅ. ಬಿ.ಡಬ್ಲ್ಯೂ.ಎಸ್.ಎಸ್.ಬಿ | 9686566945 |
| 5 | ಶ್ರೀ.ರಮೇಶ್ | ಸ.ಕಾ.ಅ. ಬೀದಿ ದೀಪ ಇಲಾಖೆ | 9986835425 |
| 6 | ಶ್ರೀ.ಸಂತೋಷ್ ದೀಪು | ಅರಣ್ಯ | 8884324927 |
| 7 | ಶ್ರೀ.ರಮೇಶ್.ಎಲ್. | ಕಿ.ಆ.ಪ. | 9902785690 |
| 8 | ಶ್ರೀ.ಶ್ರೀಧರ್.ಎಸ್. | ಹಿ.ಆ.ಪ | 9739453414 |
| 9 | ಶ್ರೀ.ರಾಜೇಂದ್ರ ರೆಡ್ಡಿ | ಸದಸ್ಯರು | 9986490283 |

Scanned by CamScanner

| | | | |
|---|---|---|---|
| 10 | ಶ್ರೀ.ಮಂಜುನಾಥ | ಸದಸ್ಯರು | 9845680018 |
| 11 | ಶ್ರೀ.ರಮೇಶ್ | ಸದಸ್ಯರು | 9035513888 |

## ಸಭೆಯ ನಡಾವಳಿಗಳು

1. ವಾರ್ಡ್‌ನ ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಗಾರ್ಮೆಂಟ್ಸ್ ಪ್ರದೇಶ, ಶಾಲೆಗಳಲ್ಲಿ, ಹಾಗೂ ಜನನಿಬಿಡ ಪ್ರದೇಶಗಳಲ್ಲಿ, ವಸತಿ ಸಮುಚ್ಚಯಗಳಲ್ಲಿ ಕೋವಿಡ್-19 ರೋಗದ ಇನ್ನು ಹೆಚ್ಚಿನ ಟೆಸ್ಟ್‌ಗಳನ್ನು ಮಾಡುವಂತೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.
   ಕ್ರಮ: ಆರೋಗ್ಯ ವೈದ್ಯಾದಿಕಾರಿ, ಬೇಗೂರು ಪ್ರಾಥಮಿಕ ಆರೋಗ್ಯ ಕೇಂದ್ರ/ಹಿರಿಯ ಆರೋಗ್ಯ ಪರಿವೀಕ್ಷಕರು ಬೇಗೂರು

2. ಬೇಗೂರು ವ್ಯಾಪ್ತಿಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ. ವತಿಯಿಂದ ಒಳಚರಂಡಿ ವ್ಯವಸ್ಥೆ, ಅಳವಡಿಸಲು ರಸ್ತೆಯನ್ನು ಅಗೆದಿದ್ದು ಸದರಿ ರಸ್ತೆಯನ್ನು ಪುನರ್ ನಿರ್ಮಾಣ ಮಾಡಿಕೊಡುವಂತೆ ನಾಗರೀಕರು ಕೋರಿಕೊಂಡಿರುತ್ತಾರೆ.
   ಕ್ರಮ: ಸಹಾಯಕ ಅಭಿಯಂತರರು, ಅಂದಾಜು ಪಟ್ಟಿಯನ್ನು ಸಲ್ಲಿಸುವಂತೆ ಸೂಚಿಸಲಾಯಿತು.

3. ಶಿಥಿಲಾವಸ್ಥೆಯಲ್ಲಿರುವ/ಅಪಾಯಸ್ಥಿತಿಯಲ್ಲಿರುವ ಮರಗಳನ್ನು ಕಠಾವು ಮಾಡಿ, ಅವಕಾಶ ಇರುವ ಜಾಗದಲ್ಲಿ ಸಸಿಗಳನ್ನು ನೆಡಲು ವಾರ್ಡ್ ಸಮಿತಿಯ ಅಧ್ಯಕ್ಷರು ಅರಣ್ಯ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.
   ಕ್ರಮ: ಅರಣ್ಯ ಸಂರಕ್ಷಣಾಧಿಕಾರಿಗಳು ಕ್ರಮವಹಿಸಲು ಸೂಚಿಸಲಾಯಿತು.

4. ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಬಗೆಹರಿಸಿ ಅವಶ್ಯವಿರುವ ಕಡೆ ಟ್ಯಾಂಕರ್‌ಗಳ ಮೂಲಕ ನೀರು ಸರಬರಾಜು ಮಾಡಲು ಸಭೆಯಲ್ಲಿ ಉಪಸ್ಥಿತರಿದ್ದ ಸಹಾಯಕ.ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ. ರವರಿಗೆ ಹಾಗೂ ವಾರ್ಡ್‌ನ ಸಹಾಯಕ ಅಭಿಯಂತರರು, ಬಿ.ಬಿ.ಎಂ.ಪಿ. ರವರಿಗೆ ಸೂಕ್ತ ಕ್ರಮವಹಿಸಿ ಸಮಸ್ಯೆ ಪರಿಹರಿಸುವಂತೆ ಸೂಚಿಸಿದರು.
   ಕ್ರಮ: ಸಹಾಯಕ ಅಭಿಯಂತರರು, ಪಾಲಿಕೆ/ಬಿ.ಡಬ್ಲ್ಯೂ.ಎಸ್.ಎಸ್.ಬಿ.

5. ವಾರ್ಡ್ ವ್ಯಾಪ್ತಿಯಲ್ಲಿ ಕೆಲವು ಬಡಾವಣೆಗಳಲ್ಲಿ ಬೀದಿ ದೀಪಗಳು ಹಾಳಾಗಿದ್ದು ಇದರಿಂದಾಗಿ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗಿರುವ ಬಗ್ಗೆ ಬಂದಿರುವ ದೂರುಗಳನ್ನು ಅಧ್ಯಕ್ಷರು ಪರಿಶೀಲಿಸಿ ಸಭೆಯಲ್ಲಿ ಉಪಸ್ಥಿತರಿದ್ದ ಬೀದಿ ದೀಪ ನಿರ್ವಹಣಾ ಅಭಿಯಂತರರು ರವರಿಗೆ ಸೂಕ್ತ ಕ್ರಮ ವಹಿಸಲು ಸೂಚಿಸಿದರು.
   ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು,(ವಿದ್ಯುತ್ ವಿಭಾಗ)

Scanned by CamScanner

6. ವಾರ್ಡ್ ವ್ಯಾಪ್ತಿಯಲ್ಲಿ ಸ್ವಾನಗಳ ಹಾವಳಿ ಹೆಚ್ಚಾಗಿದ್ದು ಇದರಿಂದ ಸಾರ್ವಜನಿಕರು ಹಾಗೂ ಮಕ್ಕಳಿಗೆ ಓಡಾಡಲು ತೊಂದರೆಯಾಗುತ್ತಿದ್ದು ಈ ಬಗ್ಗೆ ಸೂಕ್ತ ಕ್ರಮವಹಿಸುವಂತೆ ಸಭೆಯಲ್ಲಿ ಅಧ್ಯಕ್ಷರು ಸೂಚಿಸಿದರು.
ಕ್ರಮ: ಡಾ//ರವಿ. ಪಶು ಸಂಗೋಪನಾ ಇಲಾಖೆ,(ಪಾಲಿಕೆ), ಬೊಮ್ಮನಹಳ್ಳಿ

7. ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆಗೆ ಸಂಬಂದಿಸಿದಂತೆ, ಸರಿಯಾದ ರೀತಿಯಲ್ಲಿ ಘನತ್ಯಾಜ್ಯ ವಿಂಗಡಣೆಗೆ ಮತ್ತಷ್ಟು ಕ್ರಮ ಕೈಗೊಳ್ಳುವುದು ಹಾಗೂ ಬ್ಲಾಕ್‌ಸ್ಪಾಟ್‌ಗಳನ್ನು ಸ್ವಚ್ಛಗೊಳಿಸಿ ಸದರಿ ಜಾಗದಲ್ಲಿ ಮತ್ತೆ ಬ್ಲಾಕ್‌ಸ್ಪಾಟ್‌ಗಳು ಉದ್ಭವವಾಗದಂತೆ ನಿರ್ವಹಣೆ ಮಾಡುವುದು ಹಾಗೂ ಪೌರಕಾರ್ಮಿಕರಿಗೆ ಮಾಸ್ಕ್ ಮತ್ತು ಗ್ಲೌಸ್‌ಗಳನ್ನು ಸಮರ್ಪಕವಾಗಿ ವಿತರಣೆ ಮಾಡಲು ಅಧಿಕಾರಿಗಳಿಗೆ ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸೂಚಿಸಿದರು.
ಕ್ರಮ: ಕಿರಿಯ ಆರೋಗ್ಯ ಪರಿವೀಕ್ಷಕರು(ಘನತ್ಯಾಜ್ಯ ನಿರ್ವಹಣಾ ಘಟಕ)

8. ವಾರ್ಡ್‌ನ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುವ ಪೌರಕಾರ್ಮಿಕರಿಗೆ ಅವಶ್ಯಕ್ಕೆ ಅನುಗುಣವಾಗಿ ಕೋವಿಡ್-19 ಟೆಸ್ಟ್‌ಗಳನ್ನು ಮಾಡಲು ಅಧಿಕಾರಿಗಳಿಗೆ ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸೂಚಿಸಿದರು.
ಕ್ರಮ: ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ-192, ಬೇಗೂರು.

<u>ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.</u>

ಕಾರ್ಯದರ್ಶಿ ಮತ್ತು ಸಂಚಾಲಕರು
ವಾರ್ಡ್ ನಂ -192 ಬೇಗೂರು

7/11/2020
ಅಧ್ಯಕ್ಷರು
ವಾರ್ಡ್ ಕಮಿಟಿ ಅಧ್ಯಕ್ಷರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ವಾರ್ಡ್ ನಂ-192, ಬೇಗೂರು

**ಪ್ರತಿಗಳು:-**
1) ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ವಲಯ ರವರ ಅವಗಾಹನೆಗೆ ಮಂಡಿಸಿದೆ.
2) ಉಪ ಆಯುಕ್ತರು (ಬೊಮ್ಮನಹಳ್ಳಿ) ವಲಯ ರವರ ಅವಗಾಹನೆಗೆ ಮಂಡಿಸಿದೆ
3) ಸಹಾಯಕ ಕಂದಾಯ ಅಧಿಕಾರಿ (ಬೇಗೂರು) ಉಪವಿಭಾಗ ರವರ ಅವಗಾಹನೆಗೆ ಮಂಡಿಸಿದೆ
4) ವಾರ್ಡ್ ಸಮಿತಿ ಸದಸ್ಯರು ರವರಿಗೆ ಕಳುಹಿಸಲಾಗಿದೆ.
5) ಕಛೇರಿ ಕಡತಕ್ಕೆ

Scanned by CamScanner